ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಗ್ರಾಮ ಪಂಚಾಯತಿಗಳಲ್ಲಿ ಶುದ್ಧೀಕರಿಸಿದ ಕುಡಿಯುವ ನೀರನ್ನು ಪೂರೈಸುವ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು ):-

650 (749) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತ ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಿಡಬ್ಲ್ಯೂಎಸ್ (Piped water supply) ಮತ್ತು ಎಂಡಬ್ಲ್ಯೂಎಸ್ (mini water supply) ಮೂಲಕ ಸಾರ್ವಜನಿಕರಿಗೆ ಕುಡಿಯುವ ನೀರನ್ನು ನೀಡುತ್ತಿರುವ ಗ್ರಾಮ, ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ನೀರನ್ನು ಶುದ್ಧೀಕರಿಸದೇ ನೇರವಾಗಿ ಕುಡಿಯುವ ನೀರಿನ ಮೂಲವಾದ ಬಾವಿ ಮತ್ತು ನದಿಗಳಿಂದ ಜನರಿಗೆ ನೀಡುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; Pressure filter ಅಳವಡಿಸಿ ನೀರನ್ನು ಶುದ್ಧೀಕರಿಸಿ ಜನರಿಗೆ ನೀಡುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಬೇಸಿಗೆಯಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಪೂರೈಸಲು ಸರ್ಕಾರದಿಂದ ವಿಧಿಸಲಾದ ಷರತ್ತುಗಳೇನು ; ಶುದ್ಧೀಕರಿಸಿದ ನೀರನ್ನು ಪೂರೈಸದ ಬದಲಿಗೆ ಬಾವಿ ಮತ್ತು ಹೊಳೆಗಳಿಂದ ನೇರವಾಗಿ ಟ್ಯಾಂಕರ್ ಮೂಲಕ ನೀರನ್ನು ಪೂರೈಸುವವರ ವಿರುದ್ಧ ಯಾವ ಕ್ರಮ ವಹಿಸಲಾಗಿದೆ; ಕ್ರಮ ವಹಿಸದಿದ್ದಲ್ಲಿ, ಕಾರಣವೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಬೇಸಿಗೆಯಲ್ಲಿ ಟ್ಯಾಂಕರ್ ನೀರು ಸರಬರಾಜಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; (ವರ್ಷವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಪ್ರತಿ ವರ್ಷ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡುವ ಗ್ರಾಮಗಳಿಗೆ ಶಾಶ್ವತ ಶುದ್ಧ ಕುಡಿಯುವ ನೀರನ್ನು ಒದಗಿಸುವ ಕುರಿತು ಸರ್ಕಾರದಿಂದ ಯಾವ ಕ್ರಮ ವಹಿಸಲಾಗಿದೆ ?